ಆಲೂರು ಪಟ್ಟಣದ ಸರ್ಕಾರಿ ಪ್ರೌಢಶಾಲೆ ಹಾಗೂ ಕಿರಿಯ ಕಾಲೇಜು ಕಟ್ಟಡಗಳು

244 (566) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಾಸನ ಜಿಲ್ಲೆ, ಆಲೂರು ಪಟ್ಟಣದ ಸರ್ಕಾರಿ ಪ್ರೌಢಶಾಲೆ ಮತ್ತು ಕಿರಿಯ ಕಾಲೇಜು ಕಟ್ಟಡ ತುಂಬಾ ಹಳೆಯದಾಗಿದ್ದು ಹಾಗು ಚಿಕ್ಕದಾಗಿದ್ದು, ಮಕ್ಕಳ ಸಂಖ್ಯೆ ಒಂದು ಸಾವಿರಕ್ಕೂ ಮೀರಿದ್ದು, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಜಾಗ ಸಾಕಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಅಗತ್ಯವಾದ ಕಟ್ಟಡಗಳನ್ನು ಯಾವಾಗ ನಿರ್ಮಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಆಲೂರು ಇಲ್ಲಿ ಪ್ರೌಢಶಾಲಾ ವಿಭಾಗದಲ್ಲಿ – 316 ಮಕ್ಕಳು ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ – 650 ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಇಲ್ಲಿ ಪಾಳಿ ಪದ್ಧತಿಯಲ್ಲಿ ಶಾಲೆ ನಡೆಯುತ್ತಿದೆ.

ಆ) ಆರ್.ಸಿ.ಸಿ.ಯ–8 ಕೊಠಡಿಗಳು, ಹೆಂಚು ಹೊದಿಕೆಯ–9 ಕೊಠಡಿಗಳು ಸೇರಿ ಒಟ್ಟು 17 ಕೊಠಡಿಗಳು ಇರುತ್ತದೆ ಇದರಲ್ಲಿ 5 ಕೊಠಡಿಗಳು ಶಿಥಿಲವಾಗಿವೆ.

ಆರ್.ಎಂ.ಎಸ್.ಎ. ಅಡಿ ಹಾಗೂ ರಾಜ್ಯ ವಲಯ ಮುಂದುವರಿದ ಯೋಜನೆಯಡಿ/ ಯೋಜನೇತರಡಿ ಅನುದಾನ ಲಭ್ಯತೆಯ ಆಧಾರದ ಮೇಲೆ ಹೆಚ್ಚುವರಿ ಕೊಠಡಿಗಳನ್ನು ನೀಡಲಾಗುವುದು.

ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವುದು

280 (879) ಶ್ರೀ ರೇವಣ್ಣ ಹೆಚ್.ಡಿ. (ಹೊಳೇನರಸೀಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿರುವ ಆಸ್ಪತ್ರೆಗಳನ್ನು ಪ್ರತಿ ವರ್ಷ ಮೇಲ್ದರ್ಜೆಗೇರಿಸಲು ಸರ್ಕಾರದಲ್ಲಿರುವ ಮಾನದಂಡವೇನು ;

ಆ) ಕಳೆದ ಮೂರು ವರ್ಷಗಳಲ್ಲಿ ಮೇಲ್ದರ್ಜೆಗೇರಿಸಲಾದ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವರ್ಷವಾರು, ವಿಧಾನಸಭಾವಾರು ಮಾಹಿತಿ ನೀಡುವುದು)

ಇ) ಸ್ವಂತ ಕಟ್ಟಡಗಳಿಲ್ಲದೆ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಆಸ್ಪತ್ರೆಗಳೆಷ್ಟು; (ವಿಧಾನಸಭಾವಾರು ಮಾಹಿತಿ ನೀಡುವುದು) ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಆಸ್ಪತ್ರೆಗಳಿಗೆ ಪ್ರತಿ ವರ್ಷ ಸಂದಾಯ ಮಾಡುತ್ತಿರುವ ಬಾಡಿಗೆ ಹಣವೆಷ್ಟು ? (ಮಾಹಿತಿ ನೀಡುವುದು)

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಆಸ್ಪತ್ರೆಗಳನ್ನು ಪ್ರತಿ ವರ್ಷ ಮೇಲ್ದರ್ಜೆಗೇರಿಸಲು ಸರ್ಕಾರದಲ್ಲಿ ಯಾವುದೇ ಮಾನದಂಡ ರೂಪಿಸಲಾಗಿಲ್ಲ.

ಆ) ಸರ್ಕಾರದ ಆದೇಶ ಸಂಖ್ಯೆ : ಆಕುಕ 660 ಸಿಜಿಎಂ 2009 ದಿನಾಂಕ : 06–04–2010ರಲ್ಲಿ ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲ್ಲೂಕಿನ ಬೂಕನಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 734 ಸಿಜಿಎಂ 2009 ದಿನಾಂಕ : 20–10–2010ರಲ್ಲಿ ಬಳ್ಳಾರಿ ಜಿಲ್ಲೆಯ ಮೋಕ, ರೂಪನಗುಡಿ ಮತ್ತು ಹೊಸಪೇಟೆ ತಾಲ್ಲೂಕಿನ ಕಂಪ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 350 ಸಿಜಿಎಂ 2010 ದಿನಾಂಕ : 11–01–2011ರಲ್ಲಿ ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಗಳ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ತಕ್ಷಣದಿಂದ ಜಾರಿಗೆ ಬರುವಂತೆ 3 ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ.

ಇ) ರಾಜ್ಯ ಸರ್ಕಾರದ ವತಿಯಿಂದ ಪ್ರಾರಂಭಿಸಲಾಗಿರುವ ವಿವಿಧ ಆಸ್ಪತ್ರೆಗಳು ಸ್ವಂತ ಕಟ್ಟಡಗಳು ಮತ್ತು ಸ್ಥಳೀಯರು ಒದಗಿಸಿರುವ ಉಚಿತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಅವುಗಳಿಗೆ ಬಾಡಿಗೆ ಸಂದಾಯ ಮಾಡುತ್ತಿಲ್ಲ.

ಕಾ.ಸೂ. 03281, ದಿ: 09–01–2014, 350 ಪುಸ್ತಕಗಳು ಸ.ಕೇ.ಮು. ಘಟಕ–2, ಬೆಂ–59.